[redacted]



# ಬೈಲಹೊಂಗಲ ಕ್ಷೇತ್ರದಲ್ಲಿ ಸಚಿವರಿಂದ ಪ್ರಚಾರ



ಬೈಲಹೊಂಗಲ: ದೇಶದ ಪ್ರಮುಖ ಯೋಜನೆಗಳನ್ನು ಜಾರಿಗೆ ತಂದಿದ್ದು ಕಾಂಗ್ರೆಸ್ ಪಕ್ಷ. ದೇಶದ ಬಡ ಜನರ ಹಸಿವನ್ನ ನೀಗಿಸಿರುವ ಪಕ್ಷ ಕಾಂಗ್ರೆಸ್. ಆದರೆ, ಬಿಜೆಪಿಯವರು ಹೇಳುವುದು ಒಂದು ಮಾಡುವುದು ಒಂದು. ಜನರ ಭಾವನೆಗಳನ್ನು ಕೆರಳಿಸಿ ಅಧಿಕಾರಕ್ಕೇರುವುದೇ ಅವರ ಕೆಲಸ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಆರೋಪಿಸಿದರು.

ಇಂಚಲ ಹಾಗೂ ಚಚಡಿ ಗ್ರಾಮಗಳಲ್ಲಿ ಸೋಮವಾರ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಪ್ರಚಾರ ನಡೆಸಿದ ಸಚಿವರು, ಕೇಂದ್ರ ಸರ್ಕಾರದ ಅಸಹಾಯಕತೆ ನಡುವೆಯೂ ಜನರ ಆಶೋತ್ತರಗಳನ್ನು ನಾವು ಈಡೇರಿಸುತ್ತಿದ್ದೇವೆ ಎಂದು ಹೇಳಿದರು.

ನಾನು ಹೋದ ಕಡೆ ಹೆಚ್ಚಿನ ಮಹಿಳೆಯರು ಪ್ರಚಾರ ಸಭೆಗಳಿಗೆ ಆಗಮಿಸುತ್ತಿದ್ದಾರೆ. ನಿಜಕ್ಕೂ ಇದೊಂದು ಖುಷಿಯ ವಿಚಾರ. ಕೋವಿಡ್ ಬಳಿಕ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನರು ತತ್ತರಿಸಿ ಹೋಗಿದ್ದರು. ಬಡ ಕುಟುಂಬಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಯಿತು. ಕೊಟ್ಟ ಭರವಸೆಯಂತೆ ಅಧಿಕಾರಕ್ಕೆ ಬಂದ ಕೇವಲ 100 ದಿನಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಯಿತು ಎಂದರು.

ಉಚಿತ ವಿದ್ಯುತ್, ಗೃಹಲಕ್ಷ್ಮಿ ಯೋಜನೆಗಳು ಮಹಿಳೆಯರಿಗೆ ತುಂಬಾ ಅನುಕೂಲ ಮಾಡಿಕೊಟ್ಟಿವೆ. ಸಾಮಾಜಿಕ ಕಾಳಜಿ ಹೊಂದಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದರು. ಪ್ರತಿ ತಿಂಗಳು, ಒಂದು ಕುಟುಂಬಕ್ಕೆ 4-5 ಸಾವಿರ ರೂಪಾಯಿ ಉಳಿತಾಯವಾಗುತ್ತಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ನಾವು ಬಿಜೆಪಿಯವರ ಹಾಗೆ ಅಲ್ಲ. ನಾವು ಹೇಳಿದನ್ನೆ ಮಾಡುತ್ತೇವೆ. 2014ರಲ್ಲಿ ಬಿಜೆಪಿಯವರು ಕೊಟ್ಟ ಭರವಸೆಗಳಲ್ಲಿ ಒಂದನ್ನೂ ಈಡೇರಿಸಿಲ್ಲ. ರೈತರ ಆದಾಯ ದುಪ್ಪಟ್ಟು ಆಗಲಿಲ್ಲ. ಬದಲಿಗೆ ಗೊಬ್ಬರದ ಬೆಲೆ, ಸಿಲಿಂಡರ್ ಬೆಲೆ ದುಪ್ಪಟ್ಟಾಯಿತು. ದೇಶದ ಪ್ರಮುಖ ಯೋಜನೆಗಳನ್ನ ಜಾರಿಗೆ ತಂದಿದ್ದು ಕಾಂಗ್ರೆಸ್, ಬಿಜೆಪಿಯವರ ಕೊಡುಗೆ ಶೂನ್ಯ. ಜಾತಿ ಜಾತಿ ನಡುವೆ ವಿಷ ಬೀಜ ಬಿತ್ತೋದೆ ಬಿಜೆಪಿಯವರ ಕೆಲಸ, ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರೈತರ ಸಾಲ ಮನ್ನಾ ಮಾಡಲಾಗುವುದು. ಜೊತೆಗೆ ವರ್ಷಕ್ಕೆ ಒಂದು ಲಕ್ಷ ರೂಪಾಯಿ ನೀಡುವ ಮಹಾಲಕ್ಷ್ಮಿ ಯೋಜನೆಯನ್ನು ಜಾರಿಗೆ ತರಲಾಗುವುದು ಎಂದರು.

ಬೆಳಗಾವಿಯಿಂದ ನಾಲ್ಕು ಬಾರಿ ಬಿಜೆಪಿ ಸಂಸದರು ಆಯ್ಕೆಯಾಗಿದ್ದರೂ ಕ್ಷೇತ್ರಕ್ಕೆ ಯಾವುದೇ ಪ್ರಯೋಜನವಾಗಿಲ್ಲ. ಬೆಳಗಾವಿಯ ಮನೆ ಮಗನಾದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಬೆಂಬಲಿಸಿ, ಗೆಲ್ಲಿಸಬೇಕು. ಕ್ಷೇತ್ರದ ಅಭಿವೃದ್ಧಿಗೆ ಹಗಲಿರುಳು ದುಡಿಯುತ್ತಾನೆ ಎಂದು ಸಚಿವರು ಹೇಳಿದರು.

ಈ ವೇಳೆ ಮಾತನಾಡಿದ ಬೈಲಹೊಂಗಲ ಶಾಸಕ ಮಹಾಂತೇಶ್ ಕೌಜಲಗಿ, ಬಡ ಜನರಿಗೆ ಮಾರಕವಾಗಿರುವ ಕೇಂದ್ರ ಸರ್ಕಾರವನ್ನು ಕಿತ್ತೊಗೆಯಬೇಕು. ವರ್ಷಕ್ಕೆ ಎರಡು ಕೋಟಿ ಉದ್ಯೋಗ ಸೃಷ್ಟಿ ಮಾಡುವುದಾಗಿ ಹೇಳಿದ್ದ ಕೇಂದ್ರ ಸರ್ಕಾರ, ಒಂದೇ ಒಂದು ಉದ್ಯೋಗ ಕೊಡಲಿಲ್ಲ. ಬೆಳಗಾವಿ ಧ್ವನಿಯಾಗಿ ಮೃಣಾಲ್ ಹೆಬ್ಬಾಳ್ಕರ್ ಕೆಲಸ ಮಾಡಲಿದ್ದಾರೆ. ಈ ಬಾರಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಎಂದು ಕರೆ ನೀಡಿದರು.

ಬಳಿಕ ಮಾತನಾಡಿದ ಕಿತ್ತೂರು ಶಾಸಕ ಬಾಬಾ ಸಾಹೇಬ್ ಪಾಟೀಲ್, ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕಾರ್ತಿಕ್ ಪಾಟೀಲ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಂಕರಗೌಡ ಪಾಟೀಲ, ಶಿವರುದ್ರಪ್ಪ ಹಟ್ಟಿಹೊಳಿ, ಗೀತಾ ಬಾಯಿ ದೇಸಾಯಿ ಬಸಪ್ಪ ಮುನವಳ್ಳಿ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

# ಮತ ನೀಡಿದ್ದು ಸಾರ್ಥಕವಾಯಿತು ಎನ್ನುವ ಭಾವನೆ ಜನರಲ್ಲಿ ಬರುವಂತೆ ಕೆಲಸ ಮಾಡುತ್ತೇನೆ – ಮೃಣಾಲ ಹೆಬ್ಬಾಳಕರ್



ಬೆಳಗಾವಿ : ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಕೆಎ???ಸ್ ಸಂಸ್ಥೆಯ ಗೋಗಟೆ ಇನ್ ಸ್ಟಿಟ್ಯೂಟ್ ಆಫ್ ಎಂಜಿನಿಯರಿಂಗ್ ಕಾಲೇಜಿನಲ್ಲಿ ಎಂಜಿನಿಯರಿಂಗ್ ಪದವಿ ಪಡೆದಿದ್ದಾರೆ. ತಾವು ಕಲಿತ ಕಾಲೇಜಿನಲ್ಲಿ ಸೋಮವಾರ ವಿದ್ಯಾರ್ಥಿಗಳೊಂದಿಗೆ ಅವರು ಸುಮಾರು 2 ಗಂಟೆಗಳಿಗೂ ಹೆಚ್ಚು ಸಮಯ ಸಂವಾದ ನಡೆಸಿ, ವಿದ್ಯಾರ್ಥಿಗಳ ಪ್ರಶ್ನೆಗೆ ಅತ್ಯಂತ ಸಮರ್ಪಕ ಉತ್ತರ ನೀಡಿದರು.

ವಿದ್ಯಾರ್ಥಿಗಳು ಹತ್ತಾರು ಪ್ರಶ್ನೆಗಳನ್ನು ಕೇಳುವ ಮೂಲಕ ತಮ್ಮ ಮನಸ್ಸಿನಲ್ಲಿರುವ ಸಂಶಯಗಳಿಗೆ ಪರಿಹಾರ ಕಂಡುಕೊಂಡರು. ನೀವು ರಾಜಕೀಯಕ್ಕೆ ಬಂದಿದ್ದೇಕೆ? ಇದಕ್ಕೆ ಪ್ರೇರಣೆ ಏನು? ನಿಮ್ಮ ಗುರಿ ಏನು? ನಿಮ್ಮ ವಿದ್ಯಾರ್ಥಿ ಜೀವನ ಹೇಗಿತ್ತು? ಪ್ರಸ್ತುತ ರಾಜಕೀಯ ವ್ಯವಸ್ಥೆಯನ್ನು ಸುಧಾರಿಸುವುದು ಹೇಗೆ? ಹೀಗೆ ಹತ್ತಾರು ಪ್ರಶ್ನೆಗಳನ್ನು ವಿದ್ಯಾರ್ಥಿಗಳು ಕೇಳಿದರು. ಎಲ್ಲದಕ್ಕೂ ಸಮರ್ಥವಾಗಿ ಉತ್ತರಿಸುವ ಮೂಲಕ ತಮ್ಮಲ್ಲಿರುವ ನಾಯಕತ್ವ ಗುಣವನ್ನು ಸಾಬೀತುಪಡಿಸಿದರು.

ಜನನಾಯಕನಾಗಬೇಕೆನ್ನುವ ಬಯಕೆ ನಿಮಗೆ ಹುಟ್ಟಿದ್ದು ಹೇಗೆ ಎನ್ನುವ ಪ್ರಶ್ನೆಗೆ ಉತ್ತರಿಸಿದ ಮೃಣಾಲ ಹೆಬ್ಬಾಳಕರ್, ನಾನು ಕಳೆದ 10 ವರ್ಷದಿಂದ ತಾಯಿ ಲಕ್ಷ್ಮೀ ಹೆಬ್ಬಾಳಕರ್ ಅವರು ಸಮಾಜ ಸೇವೆ ಮತ್ತು ರಾಜಕೀಯದಲ್ಲಿ ಕೆಲಸ ಮಾಡುವುದನ್ನು ಹತ್ತಿರದಿಂದ ನೋಡುತ್ತ ಬಂದಿದ್ದೇನೆ. ಅವರ ಕೆಲಸಕ್ಕೆ ನನ್ನಿಂದಾದ ಸಹಾಯವನ್ನೂ ಮಾಡುತ್ತ ಬಂದಿದ್ದೇನೆ. ಹಾಗೆ ಮಾಡುವಾಗ ಅತ್ಯಂತ ಕಷ್ಟದಲ್ಲಿರುವವರು ಬಂದು ಸಹಾಯಕ್ಕಾಗಿ ಮೊರೆ ಇಡುವುದನ್ನು ನೋಡಿ ತಾಯಿಯವರು ಬಹಳ ಕನಿಕರದಿಂದ ಅವರ ಸಹಾಯಕ್ಕೆ ನಿಲ್ಲುವುದನ್ನು, ಅವರ ಸಮಸ್ಯೆ ಪರಿಹರಿಸಿ, ಖುಷಿ ಪಡುವುದನ್ನು ನೋಡಿದ್ದೇನೆ. ಹಾಗಾಗಿ ಜನರ ಕಷ್ಟಕ್ಕೆ ಸ್ಪಂದಿಸುವುದರಲ್ಲಿ, ಅವರ ಕಷ್ಟವನ್ನು ಪರಿಹರಿಸುವುದರಲ್ಲಿ ಇರುವ ಸಂತೋಷ ಬೇರೆಲ್ಲೂ ಸಿಗುವುದಿಲ್ಲ ಎಂದು ಅರಿತ ನಾನು, ನಾನೂ ಕೂಡ ರಾಜಕೀಯದ ಮೂಲಕ ಸಮಾಜ ಸೇವೆಯಲ್ಲಿ ತೊಡಗಿಕೊಳ್ಳಬೇಕೆಂದು ನಿರ್ಧರಿಸಿದೆ. ಹಾಗಾಗಿ ಆ ದಿಸೆಯಲ್ಲಿ 10 ವರ್ಷದಿಂದ ಕೆಲಸ ಮಾಡುತ್ತ ಇಂದು ನಿಮ್ಮ ಮುಂದೆ ಲೋಕಸಭೆಯ ಅಭ್ಯರ್ಥಿಯಾಗಿ ನಿಂತಿದ್ದೇನೆ ಎಂದರು.

ನಿಮ್ಮ ಕಾಲೇಜು ಜೀವನ ಹೇಗಿತ್ತು ಮತ್ತು ರಾಜಕೀಯಕ್ಕಿಳಿಯಲು ವಿದ್ಯಾರ್ಥಿ ಜೀವನದಲ್ಲಿ ಹೇಗೆ ಪ್ರೇರಣೆ ಸಿಕ್ಕಿತು ಎನ್ನುವ ಪ್ರಶ್ನೆಗೆ, ನಾನು ವಿದ್ಯಾರ್ಥಿಯಾಗಿದ್ದಾಗಿನಿಂದಲೂ ನಾಯಕತ್ವ ಗುಣ ಬೆಳೆಸಿಕೊಂಡು ಬಂದವನು. ಆಗಿನಿಂದಲೂ ಎಲ್ಲರ ಜೊತೆ ಸ್ನೇಹಪರ ವ್ಯಕ್ತಿತ್ವ ಇಟ್ಟುಕೊಂಡಿದ್ದೆ. ಸ್ನೇಹಿತರಿಗೆ ನನ್ನಿಂದಾದ ಸಹಾಯ ಮಾಡುತ್ತ ಬಂದಿದ್ದೆ. ವಿದ್ಯಾರ್ಥಿ ಜೀವನದಲ್ಲಿ ಕಲಿತ ಬಹಳಷ್ಟು ವಿಷಯಗಳು, ಇಲ್ಲಿ ಪಡೆದ ಅನುಭವ ನನ್ನನ್ನು ಇಂದು ಈ ಹಂತಕ್ಕೆ ತಂದು ನಿಲ್ಲಿಸಿದೆ. ಹಾಗಾಗಿ ವಿದ್ಯಾರ್ಥಿ ಜೀವನವನ್ನು ಯಾರೂ ವ್ಯರ್ಥವಾಗಿಸಿಕೊಳ್ಳಬಾರದು. ಅದು ಭವಿಷ್ಯದ ದಿಕ್ಸೂಚಿಯಾಗುವುದರಲ್ಲಿ ಸಂದೇಹವಿಲ್ಲ ಎಂದು ಉತ್ತರಿಸಿದರು.

ಇಲ್ಲಿರುವ ವಿದ್ಯಾರ್ಥಿಗಳು ಮತ್ತು ಇತರರಿಗೆ ಬರಲಿರುವ ಚುನಾವಣೆ ವಿಷಯದಲ್ಲಿ ಯಾವ ಸಂದೇಶ ನೀಡಲು ಬಯಸುತ್ತೀರಿ ಎನ್ನುವ ಪ್ರಶ್ನೆಗೆ, ಉತ್ತಮ ವ್ಯಕ್ತಿ ನೋಡಿ ಮತ ಕೊಡಿ. ಜಿವನದಲ್ಲಿ ಬದ್ದತೆ ಮುಖ್ಯ. ಕೇವಲ ಸ್ವಾರ್ಥಕ್ಕಾಗಿ ಕೆಲಸ ಮಾಡುವವರು, ಅಧಿಕಾರಕ್ಕಾಗಿಯೇ ರಾಜಕಾರಣ ಮಾಡುವವರನ್ನು ದೂರವಿಟ್ಟಾಗ ಮಾತ್ರ ಸ್ವಚ್ಛ ಸಮಾಜ ನಿರ್ಮಾಣ ಸಾಧ್ಯ. ಯುವಜನರು ಇದರ ಮುಂದಾಳತ್ವ ವಹಿಸಬೇಕು. ಎಲ್ಲರೊಂದಿಗೆ ಬೆರೆತು ಕೆಲಸ ಮಾಡುವಂತವರನ್ನು ಆಯ್ಕೆ ಮಾಡಬೇಕು ಎಂದರು.

ನೀವು ಆಯ್ಕೆಯಾದಲ್ಲಿ ನಿಮ್ಮ ಪ್ರಮುಖ ಗುರಿ ಏನು, ವಿಶೇಷವಾಗಿ ಯುವಜನರಿಗಾಗಿ ಏನು ಮಾಡಲಿದ್ದೀರಿ ಎನ್ನುವ ಪ್ರಶ್ನೆಗೆ, ಮೊಟ್ಟ ಮೊದಲು ವಿದ್ಯಾವಂತರಿಗೆ ಇಲ್ಲೇ ಉದ್ಯೋಗ ಮಾಡುವಂತಹ ಅವಕಾಶ ಕಲ್ಪಿಸುವುದು ನನ್ನ ಗುರಿ. ತನ್ಮೂಲಕ ನಿರುದ್ಯೋಗ ಸಮಸ್ಯೆ ನಿವಾರಣೆ, ಜೊತೆಗೆ ಪ್ರತಿಭಾ ಪಲಾಯನ ತಡೆಯಲು ಆದ್ಯತೆ ನೀಡಿ ಕೆಲಸ ಮಾಡುತ್ತೇನೆ. ಕೌಶಲ್ಯಾಭಿವೃದ್ಧಿ ಕೇಂದ್ರ ತೆರೆಯುವ ಮೂಲಕ ಉದ್ಯೋಗಸ್ಥರಾಗಲು ಮತ್ತು ಉದ್ಯಮಿಗಳಾಗಲು ಅಗತ್ಯ ನೆರವು ನೀಡುತ್ತೇನೆ. ಜೊತೆಗೆ ಜಿಲ್ಲೆಗಾಗಿ ಇನ್ನೂ ಹತ್ತಾರು ಕನಸುಗಳನ್ನು ಕಟ್ಟಿಕೊಂಡಿದ್ದೇನೆ. ಖಂಡಿತ ಜನರ ನಿರೀಕ್ಷೆಯಂತೆ ಕೆಲಸ ಮಾಡಿ, ನಮ್ಮ ಮತ ಸಾರ್ಥಕವಾಯಿತು ಎನ್ನುವಂತೆ ಕೆಲಸ ಮಾಡುತ್ತೇನೆ ಎಂದು ಮೃಣಾಲ ಹೆಬ್ಬಾಳಕರ್ ಉತ್ತರಿಸಿದರು.

ಪ್ರಸ್ತುತ ರಾಜಕೀಯ ವ್ಯವಸ್ಥೆಯನ್ನು ಬದಲಾಯಿಸಲು ನಿಮ್ಮ ಯೋಜನೆ ಏನು ಎನ್ನುವ ಪ್ರಶ್ನೆಗೆ, ಇದು ನನ್ನೊಬ್ಬನಿಂದ ಸಾಧ್ಯವಿಲ್ಲ. ಆದರೆ ಆ ದಿಸೆಯಲ್ಲಿ ನಾನು ಹೆಜ್ಜೆ ಹಾಕುತ್ತೇನೆ. ಅದಕ್ಕೆ ನಿಮ್ಮೆಲ್ಲರ ಸಹಕಾರ ಅಗತ್ಯವಿದೆ. ನಾನೊಬ್ಬನೇ ಅಲ್ಲ, ಇನ್ನೂ ನೂರಾರು ಪ್ರಾಮಾಣಿಕ ಯುವಕರು ರಾಜಕೀಯಕ್ಕೆ ಬರಬೇಕು. ರಾಜಕೀಯ ವ್ಯವಸ್ಥೆಯನ್ನು ಸುಧಾರಿಸಲು ಎಲ್ಲರೂ ಕೈಜೋಡಿಸಿದಾಗ ಅದು ಸಾಧ್ಯವಿಲ್ಲದ ಕೆಲಸವಲ್ಲ ಎಂದು ಹೇಳಿದರು.

ಪದೇ ಪದೆ ಕೇಳಿಬರುತ್ತಿರುವ ಗಡಿ ವಿವಾದ ಪರಿಹರಿಸಲು ನಿಮ್ಮ ಯೋಜನೆ ಏನು ಎನ್ನುವ ಪ್ರಶ್ನೆಗೆ, ನಾನು ನನ್ನ ಪ್ರಣಾಳಿಕೆಯಲ್ಲಿ ಈಗಾಗಲೆ ಹಾಕಿದ್ದೇನೆ, ನೆಮ್ಮದಿಯ ಮತ್ತು ಸುರಕ್ಷಿತ ಬೆಳಗಾವಿ ನನ್ನ ಕನಸು. ಇಲ್ಲಿ ಬೇಡದ ಕಾರಣಕ್ಕೆ ಗಲಭೆಗಳಾಗುವುದಕ್ಕೆ ಶಾಶ್ವತ ಪರಿಹಾರ ಕಲ್ಪಿಸಲು ನನ್ನಿಂದಾದ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಒಟ್ಟಾರೆ ಬೆಳಗಾವಿ ಒಂದು ಆದರ್ಶ ನಗರವಾಗಬೇಕು. ಲೋಕಸಭಾ ಕ್ಷೇತ್ರದ ಒಂದು ಮಾದರಿ ಕ್ಷೇತ್ರವಾಗಬೇಕು ಈ ದಿಸೆಯಲ್ಲಿ ನಾನು ಹೆಜ್ಜೆ ಇಡುತ್ತೇನೆ ಎಂದು ಉತ್ತರಿಸಿದರು.

ಮೃಣಾಲ ಹೆಬ್ಬಾಳಕರ್ ಜೊತೆಗಿನ ಸಂವಾದಕ್ಕೆ ವಿದ್ಯಾರ್ಥಿಗಳು ಅತ್ಯಂತ ಖುಷಿಪಟ್ಟು, ಅವರ ಉತ್ತರಗಳಿಗೆ ಕರತಾಡನದ ಮೂಲಕ ಮೆಚ್ಚುಗೆ ವ್ಯಕ್ತಪಡಿಸಿದರು. ತಾವೊಬ್ಬ ಸಮರ್ಥ ಸಂಸದನಾಗಬಲ್ಲೆ ಎನ್ನುವುದನ್ನು ಅವರು ನಿರೂಪಿಸುವಲ್ಲಿ ಯಶಸ್ವಿಯಾದರು.

## ಲೋಕಸಭಾ ಚುನಾವಣೆ-2024ಚಿಕ್ಕೋಡಿ ಲೋಕಸಭಾ ಮತಕ್ಷೇತ್ರ: ಅಂತಿಮ ಕಣದಲ್ಲಿ 18 ಅಭ್ಯರ್ಥಿಗಳು

ಬೆಳಗಾವಿ.ಏ-: ಲೋಕಸಭಾ ಚುನಾವಣೆಗೆ ಸಲ್ಲಿಕೆಯಾಗಿದ್ದ ನಾಮಪತ್ರಗಳನ್ನು ಹಿಂಪಡೆಯುವ ಅವಧಿ ಸೋಮವಾರ ಮುಕ್ತಾಯವಾಗಿದ್ದು ಒಟ್ಟಾರೆ 2 ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆ ವಾಪಸ ತೆಗೆದುಕೊಳ್ಳುವ ಮೂಲಕ ಅಂತಿಮ ಕಣದಲ್ಲಿ 18 ಅಭ್ಯರ್ಥಿಗಳು ಉಳಿದಿರುತ್ತಾರೆ.

ಪಕ್ಷೇತರ ಅಭ್ಯರ್ಥಿಗಳಾದ ರಾಜು ಸೊಲ್ಲಾಪುರೆ ಹಾಗೂ ಇಸ್ಮಾಯಿಲ್ ಮಗದುಮ ಅವರುಗಳು ತಮ್ಮ ಉಮೇದುವಾರಿಕೆಯನ್ನು ಏ. 22 ರಂದು ಹಿಂಪಡೆದಿದ್ದಾರೆ.

ಭಾರತೀಯ ಜನತಾ ಪಾರ್ಟಿಯಿಂದ ಅಣ್ಣಾಸಾಹೇಬ.ಎಸ್.ಜೊಲ್ಲೆ, ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ, ಸರ್ವ ಜನತಾ ಪಾರ್ಟಿ ಪಕ್ಷದಿಂದ ಅಪ್ಪಾಸಾಹೇಬ ಕುರಣೆ, ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದಿಂದ ಕುಮಾರ ಡೊಂಗರೆ, ಬಹುಜನ ಭಾರತ ಪಾರ್ಟಿಯಿಂದ ಪವನಕುಮಾರ ಬಾಬುರಾವ ಮಾಳಗೆ, ಭಾರತೀಯ ಜವಾನ ಕಿಸಾನ ಪಾರ್ಟಿಯಿಂದ ಸತ್ಯಪ್ಪ ದಶರಥ ಕಾಳೇಲಿ, ಪಕ್ಷೇತರ ಅಭ್ಯರ್ಥಿಗಳಾದ ಕಾಡಯ್ಯ ಶಂಕರಯ್ಯ ಹಿರೇಮಠ, ಕಾಶಿನಾಥ ಕುರಣಿ, ಗಜಾನನ ಪೂಜಾರಿ, ಜಿತೇಂದ್ರ ಸುಭಾಷ ನೇರ್ಲೆ, ಭೀಮಸೇನ ಸನದಿ, ಮಹೇಶ ಅಶೋಕ, ಮೋಹನ ಮೊಟನ್ನವರ, ಯಾಸೀನ ಶಿರಾಜುದ್ದಿನ ಪಟಕಿ, ವಿಲಾಸ ಮಣ್ಣೂರ, ಶಂಭು ಕಲ್ಲೋಳಿಕರ, ಶ್ರೀಣಿಕ ಅಣ್ಣಾಸಾಹೇಬ ಜಂಗಟೆ, ಸಮ್ಮೇದ ಸರದಾರ ವರ್ಧಮಾನೆ ಅವರುಗಳ ಅಂತಿಮವಾಗಿ ಕಣದಲ್ಲಿದ್ದು, ಮೇ 7 ರಂದು ಮತದಾನ ನಡೆಯಲಿದೆ ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ತಿಳಿಸಿರುತ್ತಾರೆ.

# ನೇಹಾ ಕೊಲೆಗೆ ಸಿಎಂ ತೀವ್ರ ಖಂಡನೆ, ಕೊಲೆಗಾರನಿಗೆ ಉಗ್ರ ಶಿಕ್ಷೆ:ಸಿದ್ದರಾಮಯ್ಯ

ಮೈಸೂರು : ಏಪ್ರಿಲ್ -: ಪ್ರತಿಪಕ್ಷಗಳು ನೇಹಾ ಪ್ರಕರಣವನ್ನು ರಾಜಕೀಯಕ್ಕೆ ಬಳಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಮೈಸೂರಿನ ತಮ್ಮ ನಿವಾಸದಲ್ಲಿ ಮಾಧ್ಯಮ ದವರೊಂದಿಗೆ ಮಾತನಾಡಿದರು.

ನೇಹಾ ಕೊಲೆಯನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ ಎಂದ ಮುಖ್ಯಮಂತ್ರಿಗಳು, ಕೊಲೆಗಾರರನ್ನು ಕೂಡಲೇ ಬಂಧಿಸಲಾಗಿದೆ. ಇದು ಲವ್ ಜಿಹಾದ್ ಪ್ರಕರಣವಲ್ಲ. ಸರ್ಕಾರ ತನಿಖೆಯನ್ನು ಗಂಭೀರವಾಗಿ ಕೈಗೊಂಡಿದ್ದು. ಕೊಲೆಗಾರನಿಗೆ ಉಗ್ರ ಶಿಕ್ಷೆ ನೀಡಲು ಪ್ರಯತ್ನ ಮಾಡಲಾಗುವುದು ಎಂದರು.

ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂಬ ಬಗ್ಗೆ ಮಾತನಾಡಿ ಎಲ್ಲಾ ಕಾಲದಲ್ಲಿಯೂ ಕೊಲೆಗಳಾಗಿವೆ. ಹಾಗೆಂದು ಕಾನೂನು ಸುವ್ಯವಸ್ಥೆಯನ್ನು ಗಂಭೀರವಾಗಿ ಪರಿಗಣಿಸಿಲ್ಲ ಎಂದಲ್ಲ. ಕರ್ನಾಟಕದಲ್ಲಿ ಇರುವಷ್ಟು ಶಾಂತಿ ಸುವ್ಯವಸ್ಥೆ ಬೇರೆ ರಾಜ್ಯಗಳಲ್ಲಿಲ್ಲ. ನಾವು ಯಾವುದೇ ಕೃತ್ಯ ನಡೆದರೂ, ಅದನ್ನು ತೀವ್ರವಾಗಿ ಖಂಡಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ. ರಾಜಕೀಯಕ್ಕಾಗಿ ಒಬ್ಬರ ಸಾವನ್ನು ಬಳಸಿಕೊಳ್ಳುವುದು ದುರ್ದೈವ. ಖಂಡನೀಯ ಎಂದರು. ರಾಜ್ಯಾದ್ಯಂತ ಪ್ರತಿಭಟನೆಗಳಾಗುತ್ತಿರುವ ಬಗ್ಗೆ ಮಾತನಾಡಿ ಇದರ ಪರಿಣಾಮ ಸರ್ಕಾರದ ಮೇಲೆ ಆಗುವುದಿಲ್ಲ ಎಂದರು.

ರಾಜ್ಯದಲ್ಲಿ ಚುನಾವಣಾ ವಾತಾವರಣ ಉತ್ತಮವಾಗಿದ್ದು ದೇಶದಲ್ಲಿ ಅಥವಾ ಕರ್ನಾಟಕದಲ್ಲಿ ಮೋದಿ ಅಲೆ ಇಲ್ಲ. ಬಿಜೆಪಿ ಅಭ್ಯರ್ಥಿಗಳು ಮೋದಿ ಹೆಸರಿನಲ್ಲಿ ಮತ ಯಾಚಿಸುತ್ತಿದ್ದಾರೆ. ಮೋದಿಯವರ ಮೇಲೆ ಅವಲಂಬನೆಯಾಗಿದ್ದು, ಜನ ಮೋದಿ ಸರ್ಕಾರದ ವಿರುದ್ಧವಾಗಿದ್ದಾರೆ.ದೇಶದಲ್ಲಿ ಇಂಡಿಯಾ ಪರವಾದ ವಾತಾವರಣವಿದೆ ಎಂದರು.

ಕಾಂಗ್ರೆಸ್ ನ ಚೊಂಬು ಜಾಹೀರಾತನ್ನು ರಾಜ್ಯ ಸರ್ಕಾರದ ಖಜಾನೆ ಖಾಲಿಯಾಗಿರುವುದರ ಚಿನ್ಹೆ ಎಂದು ಬಿಜೆಪಿ ಮಾತನಾಡಿರುವ ಬಗ್ಗೆ ಮಾತನಾಡಿ ನಿನ್ನೆ ಕೊಟ್ಟಿರುವ ಜಾಹೀರಾತು ಈ ದೇಶದ ಜನರಿಗೆ ಬಿಜೆಪಿ ಸರ್ಕಾರ ಖಾಲಿ ಚಂಬು ಕೊಟ್ಟಿದೆ ಎಂದು ತಿಳಿಸಲು ನೀಡಿದೆ. ದೇಶದ ಜನರಿಗೆ 15 ಲಕ್ಷ ಕೊಟ್ಟರೇ? 2 ಕೋಟಿ ಉದ್ಯೋಗ ಸೃಷ್ಟಿ, ರೈತರ ಆದಾಯ ದುಪ್ಪಟ್ಟು , ಅಚ್ಚೇ ದಿನ್ ಬಂದಿದೆಯೇ? ಅದಕ್ಕೆ ಚಂಬು ಕೊಟ್ಟಿದ್ದಾರೆ ಎಂದು ಜಾಹೀರಾತು ನೀಡಿದೆ ಎಂದರು.

ನರೇಂದ್ರ ಮೋದಿ ರಾಜ್ಯಕ್ಕೆ ಬರುತ್ತಿದ್ದು, 11 ತಿಂಗಳಲ್ಲಿ ಬೊಕ್ಕಸ ಖಾಲಿಯಾಗಿದೆ ನಮಗೆ ಭಿಕ್ಷೆ ಕೊಡಿ ಎಂಬ ಅರ್ಥದಲ್ಲಿ ಜಾಹೀರಾತು ನೀಡಿದೆ ಎಂದು ಬಿಜೆಪಿ ಹೇಳಿಕೆ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಮೋದಿ ಕೊಟ್ಟಿರುವ ಆಶ್ವಾಸನೆಗಳನ್ನು ಒಂದನ್ನೂ ಈಡೇರಿಸಿಲ್ಲ.ದೇಶದ ಜನರಿಗೆ ಖಾಲಿ ಚಂಬು ನೀಡಿದ್ದಾರೆ ಎಂದು ಜಾಹೀರಾತು ನೀಡಿದ್ದೇವೆ. ಅವರು ಏನಾದರೂ ಹೇಳಲಿ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಬೊಕ್ಕಸ ಖಾಲಿಯಾಗಿಲ್ಲ. ಎಲ್ಲಾ ಗ್ಯಾರಂಟಿ ಗಳನ್ನು ಜಾರಿ ಮಾಡಿ ಅಭಿವೃದ್ಧಿ ಕೆಲಸವನ್ನೂ ಮಾಡಿದ್ದೇವೆ ಎಂದರು.

ಏಣಿ ಹತ್ತಿಸಿ ನಂತರ ಸರ್ವನಾಶ ಮಾಡುತ್ತಾರೆ ಎಂದು ಹೆಚ್.ಡಿ ಕುಮಾರಸ್ವಾಮಿ ಹೇಳಿರುವ ಬಗ್ಗೆ ಮಾತನಾಡಿ ಕುಮಾರಸ್ವಾಮಿ ಅವರು ಕೋಮುವಾದಿಗಳಾಗಿದ್ದು, ಜನತಾ ದಳ (ಎಸ್) ಪಕ್ಷವನ್ನು ರದ್ದು ಮಾಡಬೇಕು ಎಂದರು. ನನಗೆ ಅವರ ಬಗ್ಗೆ ಭಯವಿದ್ದರೆ ಇವರಿಬ್ಬರ ವಿರುದ್ಧ ಹೋರಾಟ ಮಾಡುತ್ತಿರಲಿಲ್ಲ. ಅವರಿಗೆ ಭಯವಿರುವುದರಿಂದ ಮೈತ್ರಿ ಮಾಡಿಕೊಂಡಿದ್ದಾರೆ ಎಂದರು.

# ಹತಾಶ ಬಿಜೆಪಿಯಿಂದ ಸಾವಿನ ಮನೆಯಲ್ಲಿ ರಾಜಕೀಯ: ಚನ್ನರಾಜ ಹಟ್ಟಿಹೊಳಿ ಆರೋಪ; ಬೃಹತ್ ರ್‍ಯಾಲಿ ನಡೆಸಿದ ಕಾಂಗ್ರೆಸ್




ಬೆಳಗಾವಿ: ಚುನಾವಣೆಗೆ ಹೋಗಲು ಯಾವುದೇ ವಿಷಯವಿಲ್ಲದೆ ಹತಾಶರಾಗಿರುವ ಭಾರತೀಯ ಜನತಾಪಾರ್ಟಿವರು ನೇಹಾ ಹಿರೇಮಠ ಸಾವಿನ ಪ್ರಕರಣವನ್ನು ರಾಜಕೀಯಕ್ಕೆ ಬಳಸುವಂತಹ ನೀಚತನಕ್ಕೆ ಳಿದಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಳಗಾವಿಯಲ್ಲಿ ಮಂಗಳವಾರ ನೇಹಾ ಹಿರೇಮಠ ಆತ್ಮಕ್ಕೆ ಶಾಂತಿ ಸಿಗಲಿ, ಅಪರಾಧಿಗೆ ಕಠಿಣ ಶಿಕ್ಷೆಯಾಗಲಿ ಎಂದು ಆಗ್ರಹಿಸಿ ಕಾಂಗ್ರೆಸ್ ಪಕ್ಷದಿಂದ ಹಮ್ಮಿಕೊಳ್ಳಲಾಗಿದ್ದ ರ್‍ಯಾಲಿಯ ಸಂದರ್ಭದಲ್ಲಿ ಮಾಧ್ಯಮಗಳಿಗೆ ಅವರು ಪ್ರತಿಕ್ರಿಯೆ ನೀಡಿದರು.

ನೇಹಾ ಹಿರೇಮಠ ಆತ್ಮಕ್ಕೆ ಶಾಂತಿ ಸಿಗಲಿ, ನ್ಯಾಯ ಸಿಗಲಿ ಎಂದು ಈ ರ್‍ಯಾಲಿಯ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡುತ್ತಿದ್ದೇವೆ. ಇಂತಹ ನೀಚ ಕೃತ್ಯವನ್ನು ವಿಕೃತ ಮನುಷ್ಯನಷ್ಟೇ ಮಾಡಬಹುದು. ಕಾನೂನು ಪ್ರಕಾರ ಅಪರಾಧಿಗೆ ಕಠಿಣ ಶಿಕ್ಷೆ ಕೊಡಬೇಕು ಎಂದು ಅವರು ಆಗ್ರಹಿಸಿದರು.

ಸರಕಾರ ಈಗಾಗಲೆ ಮಹಿಳೆಯರಿಗೆ ಆಗುವ ಅನ್ಯಾಯ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲೆಂದು ವಿಶೇಷ ನ್ಯಾಯಾಲಯ ಸ್ಥಾಪನೆ ಮಾಡಲು ನಿರ್ಧರಿಸಿದೆ. ತನ್ಮೂಲಕ ಮಹಿಳೆಯರ ಜೊತೆಗಿದ್ದೇವೆ ಎನ್ನುವುದನ್ನು ತೋರಿಸಿದ್ದೇವೆ. ಈ ವಿಷಯವನ್ನು ರಾಜಕೀಯ ಮಾಡಬೇಡಿ ಎಂದು ಈಗಾಗಲೆ ನೇಹಾ ತಂದೆ ನಿರಂಜನ ಹಿರೇಮಠ ಅವರು ಮನವಿ ಮಾಡಿದ್ದಾರೆ. ಎಲ್ಲ ಪಕ್ಷದವರೂ ತಮ್ಮ ಮನೆಗೆ ಬಂದು ಸಾಂತ್ವನ ಹೇಳಿದ್ದಾರೆ, ನ್ಯಾಯ ಕೊಡಿಸುವ ಭರವಸೆ ಸಿಕ್ಕಿದೆ ಎಂದು ಅವರು ಹೇಳಿದ್ದಾರೆ. ಇಷ್ಟಾದರೂ ಬಿಜೆಪಿಯವರು ಪ್ರಕರಣವನ್ನು ರಾಜಕೀಯಕ್ಕೆ ಬಳಸುತ್ತಿರುವುದನ್ನು ನಾವು ಖಂಡಿಸುತ್ತೇವೆ ಎಂದು ಚನ್ನರಾಜ ತಿಳಿಸಿದರು.

ಸಾವಿನ ಮನೆಯಲ್ಲಿ ರಾಜಕೀಯ ಮಾಡುವ ಬಿಜೆಪಿಯ ಹಿಡನ್ ಅಜೆಂಡಾ ಯಶಸ್ವಿಯಾಗುವುದಿಲ್ಲ. ಜನರು ಎಲ್ಲವನ್ನೂ ಗಮನಿಸುತ್ತಿದ್ದಾರೆ. ಕುಟುಂಬಕ್ಕೆ ನ್ಯಾಯ ಸಿಗಬೇಕು. ಮುಂದೆ ಯಾರೂ ಇಂತಹ ಕೃತ್ಯಕ್ಕೆ ಇಳಿಯಬಾರದು ಎನ್ನುವುದು ನಮ್ಮ ಕಳಕಳಿ ಎಂದ ಅವರು, ಪ್ರಧಾನಿ ನರೇಂದ್ರ ಮೋದಿಯವರು ಕೇವಲ ಬೇಜವಾಬ್ದಾರಿಯುತ ಭಾಷಣ ಮಾಡುವುದನ್ನು ಬಿಟ್ಟು, ದೇಶದಲ್ಲಿ ಮಹಿಳೆಯರ ರಕ್ಷಣೆಗೆ ಕಠಿಣ ಕಾನೂನು ತರಲಿ. ರಾಜ್ಯ ಸರಕಾರ ಕೈಗೊಂಡಂತೆ ವಿಶೇಷ ನ್ಯಾಯಾಲಯ ಸ್ಥಾಪನೆಯಂತಹ ಸೂಕ್ತ ಕ್ರಮಗಳನ್ನು ಕೈಗೊಳ್ಳಲಿ ಎಂದು ಒತ್ತಾಯಿಸಿದರು.

ಇಂತಹ ಕೃತ್ಯ ಯಾವ ಹೆಣ್ಣು ಮಗಳಿಗೂ ಆಗಬಾರದು. ಅಂತಹ ಶಿಕ್ಷೆ ಅಪರಾಧಿಗೆ ಆಗಬೇಕು. ಹಾಗಾಗಿ ಪ್ರಕರಣವನ್ನು ಸಿಐಡಿಗೆ ವಹಿಸಲಾಗಿದೆ. ವಿಶೇಷ ನ್ಯಾಯಾಲಯ ಸ್ಥಾಪನೆ ಮಾಡಲಾಗಿದೆ. ಆದರೆ ಬಿಜೆಪಿಯವರನ್ನು ನೋಡಿದರೆ ಪಾಪ ಎನಿಸುತ್ತಿದೆ. ಚುನಾವಣೆಗೆ ಹೋಗಲು ಅವರ ಬಳಿ ವಿಷಯವಿಲ್ಲ. ಬರಗಾಲಕ್ಕೆ ಕೇಂದ್ರ ಪರಿಹಾರ ಕೊಡಲಿಲ್ಲ ಎಂದು ಜನರು ಅವರು ಹೋದಲ್ಲೆಲ್ಲ ಕೇಳುತ್ತಿದ್ದಾರೆ. ಹಾಗಾಗಿ ದಿಕ್ಕು ತೋಚದೆ ಹತಾಶ ಮನೋಭಾವದಿಂದ ಸಾವಿನ ಮನೆಯಲ್ಲಿ ರಾಜಕೀಯ ಮಾಡುತ್ತಿದ್ದಾರೆ ಎಂದು ಚನ್ನರಾಜ ಹಟ್ಟಿಹೊಳಿ ಹೇಳಿದರು.

ಕಾಂಗ್ರೆಸ್ ಕಾರ್ಯಕರ್ತರು ಕಾಂಗ್ರೆಸ್ ಭವನದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ರ್‍ಯಾಲಿ ನಡೆಸಿ, ಮನವಿ ಸಲ್ಲಿಸಿದರು.

ಶಾಸಕರಾದ ರಾಜು ಸೇಠ್, ಬಾಬಾಸಾಹೇಬ ಪಾಟೀಲ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ, ನ್ಯಾಯವಾದಿ ಆರ್.ಪಿ.ಪಾಟೀಲ, ಜಯಶ್ರೀ ಮಾಳಗಿ, ಆಯೇಷಾ ಸನದಿ ಸೇರಿದಂತೆ ಹಲವಾರು ಮುಖಂಡರು, ಅಪಾರ ಸಂಖ್ಯೆಯಲ್ಲಿ ಕಾರ್ಯಕರ್ತರು, ಮಹಿಳೆಯರು ಭಾಗವಹಿಸಿದ್ದರು.

# ವಾರದೊಳಗೆ ಬರ ಪರಿಹಾರ ಬಿಡುಗಡೆಗೆ ಕೇಂದ್ರ ಸಮ್ಮತಿ ಕನ್ನಡಿಗರ ಸುಧೀರ್ಘ ಹೋರಾಟ ಯಶಸ್ವಿ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ರಾಜ್ಯದ ರೈತರಿಗೆ ಒಂದು ವಾರದೊಳಗೆ ಬರ ಪರಿಹಾರ ಬಿಡುಗಡೆಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್ ನಲ್ಲಿ ಇಂದು ಒಪ್ಪಿಕೊಂಡಿದೆ.

ಕರ್ನಾಟಕಕ್ಕೆ ಬರ ಪರಿಹಾರ ನಿಧಿ ಬಂದಿಲ್ಲ. ಹೀಗಾಗಿ ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ರಾಜ್ಯ ಕಾಂಗ್ರೆಸ್? ಸರ್ಕಾರ ಸುಪ್ರೀಂಕೋರ್ಟ್?ಗೆ ಅರ್ಜಿ ಸಲ್ಲಿಸಿತ್ತು. ಈ ಅರ್ಜಿಯನ್ನು ಸುಪ್ರೀಂಕೋರ್ಟ್?ನ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ದ್ವಿಸದಸ್ಯ ಪೀಠ ಇಂದು ವಿಚಾರಣೆ ನಡೆಸಿತು.ಏಪ್ರಿಲ್ 29ರೊಳಗೆ ಒಳಗೆ ಬರ ಪರಿಹಾರ ಬಿಡುಗಡೆ ಮಾಡುತ್ತೇವೆ ಎಂದು ಕೇಂದ್ರ ಸರ್ಕಾರದ ಪರ ಅಟಾರ್ನಿ ಜನರಲ್ ವೆಂಕಟರಮಣಿ ನ್ಯಾಯ ಪೀಠಕ್ಕೆ ಹೇಳಿದರು. ಇನ್ನು ಹಿರಿಯ ವಕೀಲರ ಅಲಭ್ಯತೆ ಹಿನ್ನೆಲೆಯಲ್ಲಿ ವಿಚಾರಣೆ ಮುಂದೂಡುವಂತೆ ರಾಜ್ಯ ಸರಕಾರದ ಪರ ವಕೀಲರು ಕೇಳಿಕೊಂಡರು. ವಾದ-ಪ್ರತಿವಾದವನ್ನು ಆಲಿಸಿದ ದ್ವಿಸದಸ್ಯ ನ್ಯಾಯಪೀಠ ವಿಚಾರಣೆಯನ್ನು ಏಪ್ರಿಲ್? 29ಕ್ಕೆ ಮುಂದೂಡಿತು.ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಬರ ಪರಿಹಾರ ವಿಳಂಬ ವಿಚಾರದಲ್ಲಿ ಸುಪ್ರೀಂಕೋರ್ಟ್ ಮಧ್ಯಸ್ಥಿಕೆಗೆ ಧನ್ಯವಾದ ಸಲ್ಲಿಸಿದ್ದಾರೆ.2023ರ ಸೆಪ್ಟೆಂಬರ್‌ನಲ್ಲಿ ಸಲ್ಲಿಸಲಾಗಿದ್ದ ನಮ್ಮ ಮನವಿ ಬಗ್ಗೆ ಕೇಂದ್ರ ಸರ್ಕಾರ ನಿರ್ಧಾರ ಕೈಗೊಳ್ಳದ ಕಾರಣ ಬರ ಪರಿಹಾರ ಹಣಕ್ಕಾಗಿ ಕೇಂದ್ರ ಸರ್ಕಾರದ ವಿರುದ್ಧ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸಲಾಗಿತ್ತು. ಇದೊಂದು ಮೈಲಿಗಲ್ಲು ಆಗಿದೆ.

## ಗೋಣಿ ಚೀಲಗಳ ಅಭಾವ; ದಾಸ್ತಾನು ತರದಂತೆ ರೈತರಲ್ಲಿ ಮನವಿ

ಬಳ್ಳಾರಿ,ಏ.-:2023-24 ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಲಾಗುತ್ತಿರುವ ಜೋಳ ದಾಸ್ತಾನಿಗೆ ಸಿರುಗುಪ್ಪ ಮತ್ತು ಕುರುಗೋಡು ಖರೀದಿ ಕೇಂದ್ರಗಳಲ್ಲಿ ಗೋಣಿಚೀಲ ಅಭಾವವಿದ್ದು, ರೈತರು ದಾಸ್ತಾನು ತರದಂತೆ ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನಾ ಅವರು ತಿಳಿಸಿದ್ದಾರೆ.ಸಿರುಗುಪ್ಪದಲ್ಲಿ 75.013 ಕ್ವಿಂ ಹಾಗೂ ಕುರುಗೋಡಿನಲ್ಲಿ 6939 ಕ್ವಿಂ ಬಿಳಿಜೋಳ ಖರೀದಿಸಲಾಗಿದೆ. ಖರೀದಿ ಕೇಂದ್ರಗಳಿಗೆ ಸರಬರಾಜು ಮಾಡಿದ್ದ ಗೋಣಿ ಚೀಲಗಳು ಖರ್ಚಾಗಿದ್ದು, ಮುಂಗಾರು ಮತ್ತು ಹಿಂಗಾರು ಜೋಳದ ನೋಂದಣಿಯು ಸ್ಥಗಿತವಾಗಿದೆ. ಗೋಣಿ ಚೀಲಗಳು ಖರೀದಿ ಕೇಂದ್ರಕ್ಕೆ ಬಂದಕೂಡಲೇ ಎಲ್ಲಾ ಜೇಷ್ಠತೆಯ ಆಧಾರವಾಗಿ ರೈತರಿಗೆ ದಾಸ್ತಾನು ತರಲು ಸೂಚಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಖರೀದಿ ಅಧಿಕಾರಿ ಹುಸೇನ್ ಸಾಹೇಬ್ ಕುರುಗೋಡು (ಮೊ.8951307333) ಹಾಗೂ ಮೋಹನ ಕುಮಾರ, ಸಿರುಗುಪ್ಪ (ಮೊ.9731421918) ಇವರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತರು ರಾಜ್ಯ ಸರ್ಕಾರಕ್ಕೆ ಬಹು ದೊಡ್ಡ ಗೆಲುವು

ಬೆಂಗಳೂರು, ಏ.- ರಾಜ್ಯಕ್ಕೆ ಶೀಘ್ರ ಬರ ಪರಿಹಾರವನ್ನು ಬಿಡುಗಡೆ ಮಾಡುವುದಾಗಿ ಕೇಂದ್ರ ಹೇಳಿರುವುದು ರೈತರು ಮತ್ತು ಕಾಂಗ್ರೆಸ್ ಸರ್ಕಾರದ ಬಹುದೊಡ್ಡ ಗೆಲುವು ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲಾ ಹೇಳಿದ್ದಾರೆ.ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ರಾಜ್ಯದ ರೈತರಿಗೆ ಸುಮಾರು 18 ಸಾವಿರ ಕೋಟಿ ರೂ. ಬರ ಪರಿಹಾರವನ್ನು ನಿರಾಕರಿಸುವ ಮೋದಿ ಸರ್ಕಾರದ ಪಿತೂರಿ ಕಾಗದದ ಮನೆಯಂತೆ ಕುಸಿದಿದೆ. ಅನ್ಯಾಯವು ನ್ಯಾಯದ ಮುಂದೆ ನಿಲ್ಲಲು ಸಾಧ್ಯವಿಲ್ಲ ಎಂಬುದು ಸಾಬೀತಾಗಿದೆ ಎಂದಿದ್ದಾರೆ.ಪ್ರಧಾನ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವರು ಒಕ್ಕೂಟ ವ್ಯವಸ್ಥೆಯನ್ನು ಗೌರವಿಸಲಿ ಎಂದಿರುವ ಅವರು, ದ್ವೇಷ ಹಾಗೂ ತಾರತಮ್ಯವನ್ನು ಕನ್ನಡಿಗರು ಸಹಿಸುವುದಿಲ್ಲ ಎಂಬುದನ್ನು ಅಮಿತ್ ಶಾ ಅರಿಯಬೇಕು ಎಂದಿದ್ದಾರೆ.ನಮ್ಮ ಕೊನೆಯ ಉಸಿರುವ ಇರುವವರೆಗೂ ಕಾಂಗ್ರೆಸ್ ಸರ್ಕಾರ ಕಾರ್ಯಕರ್ತರು ಮತ್ತು ಕನ್ನಡಿಗರ ಹಕ್ಕುಗಳಿಗೆ ಹೋರಾಟ ನಡೆಸುತ್ತದೆ ಎಂದು ಅವರು ಟ್ವೀಟ್‌ನಲ್ಲಿ ತಿಳಿಸಿದ್ದಾರೆ. ರಾಜ್ಯಕ್ಕೆ ಬರ ಪರಿಹಾರ ಹಣ ಬಿಡುಗಡೆ ಮಾಡುವುದಾಗಿ ಕೇಂದ್ರ ನ್ಯಾಯಾಲಯದ ಮುಂದೆ ಹೇಳಿರುವುದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಾಯಕತ್ವಕ್ಕೂ ಗೆಲುವಾಗಿದೆ ಎಂದು ಅವರು ಬಣ್ಣಿಸಿದ್ದಾರೆ.